ಮೈಸೂರು ನಗರದ ಕುಕ್ಕರಹಳ್ಳಿ ಕೆರೆ ಅಭಿವೃದ್ಧಿ

1709(2337)

ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್.(ಚಾಮರಾಜ): ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದ ಕುಕ್ಕರಹಳ್ಳಿ ಕೆರೆಗೆ ಸಂಬಂಧಿಸಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಸಣ್ಣ ನೀರಾವರಿ ಇಲಾಖೆಗೆ ಯೋಜಿಸಲಾಗಿದೆಯೇ?

ಆ) ಹಾಗಿದ್ದಲ್ಲಿ ಈ ಸಂಬಂಧ ವಿವರಗಳನ್ನು ನೀಡುವುದು?

ಶ್ರೀ ಎಸ್.ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು):

ಅ) ಮೈಸೂರು ನಗರದ ಕುಕ್ಕರಹಳ್ಳಿ ಕೆರೆಯು ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಈ ಕೆರೆ ಸಂಬಂಧಿಸಿದ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಸಣ್ಣ ನೀರಾವರಿ ಇಲಾಖೆಗೆ ವಹಿಸಿಕೊಂಡಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ವರದಕ್ಷಿಣೆ ಪ್ರಕರಣಗಳು.

1711 (1986)

ಶ್ರೀ ಜಿ.ರಾಜುಗೌಡ(ಹನ್ನೂರು): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 1999-2000, 2000-01ರಲ್ಲಿ ಎಷ್ಟು ಪ್ರಕರಣಗಳಲ್ಲಿ ವರದಕ್ಷಿಣೆ ಪಿಡುಗಿನಿಂದ ಹತರಾದವರ ಸಂಖ್ಯೆ ಎಷ್ಟು?

ಆ) ಎಷ್ಟು ಪ್ರಕರಣಗಳಲ್ಲಿ ಅಪರಾಧಿಗಳು ಶಿಕ್ಷೆಗೆ ಒಳಗಾಗಿದ್ದಾರೆ;

ಇ) ಸಾಕ್ಷ್ಯಾಧಾರಗಳಿಲ್ಲದ ಪಿನ್ನಲೆಯಲ್ಲಿ ಎಷ್ಟು ಜನ ಆರೋಪಿಗಳು ಬಿಡುಗಡೆಯಾಗಿದ್ದಾರೆ;

ಈ) ರಾಜ್ಯ ಮುಖ್ಯ ನ್ಯಾಯಾಲಯ ಈ ಬಗ್ಗೆ ಸರ್ಕಾರಕ್ಕೆ ಏನಾದರೂ ಸಲಹೆ